All India Radio: Bangalore
Regional Bulletin In Kannada
07.04.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಪೊಲೀಸರ ವೇತನ ಹೆಚ್ಚಳ ಕುರಿತಂತೆ ಹಂತಹಂತವಾಗಿ ಔರಾದ್ಕರ್ ವರದಿ ಜಾರಿ ತರಲು ಸರ್ಕಾರ ನಿರ್ಧಾರ
- ರಾಜಕೀಯ ದ್ವೇಷದಿಂದ ಅಭಿವೃದ್ಧಿ ಯೋಜನೆಗಳಿಗೆ ರಾಜ್ಯ ಸರ್ಕಾರ ಅಡ್ಡಿ- ಕೇಂದ್ರ ಸಚಿವ ಎಚ್.ಡಿ.ಕುಮಾರ್ ಸ್ವಾಮಿ ಆರೋಪ
- ಆಸ್ತಿಗಳ ಸರಳೀಕರಣಕ್ಕೆ ಎ, ಬಿ-ಖಾತಾ ಅಭಿಯಾನ; ಗ್ರಾಮೀಣ ಜನರು ಸದುಪಯೋಗಪಡಿಸಿಕೊಳ್ಳುವಂತೆ ಸಚಿವ ಪ್ರಿಯಾಂಕ್ ಖರ್ಗೆ ಕರೆ
- ಬಿಜೆಪಿ ಜನಾಕ್ರೋಶ ಯಾತ್ರೆಗೆ ಮೈಸೂರಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ
- ನಾಳೆ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ
- ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು- ಮುಂಬೈ ಇಂಡಿಯನ್ಸ್ ಮುಖಾಮುಖಿ

****************

ರಾಜ್ಯದಲ್ಲಿ ಪೋಕ್ಸೋ ಪ್ರಕರಣಗಳನ್ನು ತಡೆಯಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಮಾದಕ ವಸ್ತುಗಳು ರಾಜ್ಯ ಪ್ರವೇಶಿಸದಂತೆ ಕಟ್ಟೆಚ್ಚರ ವಹಿಸಲು ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಬ್ ಇನ್ಸ್ ಪೆಕ್ಟರ್ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ಈಗಾಗಲೇ ೫೪೫ ಸಬ್ ಇನ್ಸ್ ಪೆಕ್ಟರ್‌ಗಳು ನೇಮಕಾತಿ

ತರಬೇತಿಯಲ್ಲಿದ್ದಾರೆ. ಪ್ರಸ್ತುತ ೪೦೨ ಸಬ್ ಇನ್ಸ್ ಪೆಕ್ಟರ್ ಗಳ ನೇಮಕ ಪ್ರಗತಿಯಲ್ಲಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಪೊಲೀಸರ ವೇತನ ಹೆಚ್ಚಿಸುವ ಕುರಿತಂತೆ ಮುಂಬರುವ ದಿನಗಳಲ್ಲಿ ಹಂತಹಂತವಾಗಿ ಔರಾಧ್‌ಕರ್ ವರದಿ ಜಾರಿ ಮಾಡಲಾಗುವುದು. ಪೊಲೀಸರಿಗೆ ಇ-ಕ್ಯಾಪ್ ಜಾರಿ ಮಾಡುವ ಪ್ರಸ್ತಾವನೆ ಪರಿಶೀಲನೆ ಹಂತದಲ್ಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ರಾಜಕೀಯ ದ್ವೇಷದಿಂದ ರಾಜ್ಯ ಸರ್ಕಾರ ಅಭಿವೃದ್ಧಿಗೆ ಅಡ್ಡಿಪಡಿಸುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿಯಲ್ಲಿಂದು ಮಾತನಾಡಿದ ಅವರು, ಮಂಡ್ಯ, ರಾಮನಗರ, ತುಮಕೂರು ಜಿಲ್ಲೆಗಳ ಯಾವುದೇ ಭಾಗಕ್ಕೆ ಒಂದೆರೆಡು ಕೈಗಾರಿಕೆ ತರಬೇಕು ಎಂಬ ಉದ್ದೇಶವಿದ್ದು, ರಾಜ್ಯ ಸರ್ಕಾರ ಬೆಂಬಲ ನೀಡುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಮಂಡ್ಯ ಜನರ ನಿರೀಕ್ಷೆಗಳನ್ನು ಈಡೇರಿಸುವುದಾಗಿ ಇದೇ ವೇಳೆ ಭರವಸೆ ನೀಡಿದ್ದಾರೆ.

***************

ಆಸ್ತಿಗಳ ಸರಳೀಕರಣ ಹಾಗೂ ಬಲಿಷ್ಠಗೊಳಿಸಲು ಸರ್ಕಾರ ಎ-ಖಾತಾ ಹಾಗೂ ಬಿ-ಖಾತಾ ವ್ಯವಸ್ಥೆ ಜಾರಿಗೆ ತಂದಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಲಬುರಗಿ ಮಹಾನಗರ ಪಾಲಿಕೆಯ ಉದ್ಯಾನವನದ ಇಂದಿರಾ ಸ್ಮಾರಕ ಭವನದಲ್ಲಿ ನಡೆದ ಇ-ಖಾತಾ ಅಭಿಯಾನ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಒಟ್ಟು ೧೧ ಕೋಟಿ ೫೦ ಲಕ್ಷ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲಾಗಿದ್ದು ಇದರಿಂದ ೧ ಸಾವಿರದ ೨೭೨ ಕೋಟಿ ರೂಪಾಯಿ ತೆರಿಗೆ ಸಂಗ್ರಹವಾಗಿದೆ ಎಂದು ಹೇಳಿದ್ದಾರೆ.

ಎ ಹಾಗೂ ಬಿ-ಖಾತಾ ಅನ್ವಯ ಗ್ರಾಮೀಣ ಭಾಗದ ಸ್ವತ್ತುಗಳನ್ನು ಕಾನೂನುಬದ್ಧಗೊಳಿಸಲಾಗುತ್ತಿದ್ದು, ಅಭಿಯಾನದ ಲಾಭವನ್ನು ಎಲ್ಲರೂ ಪಡೆದುಕೊಳ್ಳಬೇಕು ಎಂದರು ಕರೆ ನೀಡಿದ್ದಾರೆ.

***************

ಕಾಂಗ್ರೆಸ್ ಸರಕಾರದ ವಿರುದ್ಧ ನಡೆಸುತ್ತಿರುವ ಬಿಜೆಪಿ ಜನಾಕ್ರೋಶ ಯಾತ್ರೆಗೆ ಮೈಸೂರಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಿದ್ದಾರೆ.

ಇದಕ್ಕೂ ಮುನ್ನ ಪಕ್ಷದ ಮುಖಂಡರಾದ ಬಿ.ವೈ.ವಿಜಯೇಂದ್ರ, ಆರ್.ಅಶೋಕ ಸೇರಿದಂತೆ ಹಲವು ನಾಯಕರು ಚಾಂಮುಂಡೇಶ್ವರಿ ದೇವಾಲಯಕ್ಕೆ ತೆರಳಿ ಪೂಜೆ ಸಲ್ಲಿಸಿದರು.

೪ ಹಂತಗಳಲ್ಲಿ ಜನಾಕ್ರೋಶ ಯಾತ್ರೆ ನಡೆಯಲಿದ್ದು, ಇಂದು ಮೈಸೂರು, ನಾಳೆ ಮಂಡ್ಯ, ಹಾಸನ, ಬಳಿಕ ಮಡಿಕೇರಿ, ಮಂಗಳೂರು- ಹೀಗೆ ಪ್ರತಿ ಜಿಲ್ಲಾ ಕೇಂದ್ರಗಳಿಗೆ  ಜನಾಕ್ರೋಶ ಯಾತ್ರೆ ತೆರಳಲಿದೆ.

ಬೆಲೆ ಏರಿಕೆ, ಮುಸ್ಲಿಮರಿಗೆ ಸರ್ಕಾರಿ ಕಾಮಗಾರಿಗಳಲ್ಲಿ ಮೀಸಲಾತಿ, ದಲಿತರ ಅಭ್ಯುದಯಕ್ಕೆ ಮೀಸಲಿಟ್ಟ ಎಸ್‌ಇಪಿ, ಟಿಎಸ್‌ಪಿ ಹಣದ ದುರ್ಬಳಕೆ ಸೇರಿದಂತೆ ಹಲವು ವಿಚಾರಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಪ್ರತಿಭಟನೆ ನಡೆಸಲು ನಿರ್ಧರಿಸಿದೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಎಚ್‌ಎಎಲ್ ವಿಮಾನ ನಿಲ್ದಾಣದಿಂದ ಗುಜರಾತ್ ಗೆ ಪ್ರಯಾಣ ಬೆಳೆಸಲಿದ್ದಾರೆ. ಅಹಮದಾಬಾದ್ ನ ಸಬರಮತಿಯಲ್ಲಿ ನಾಳೆ ನಡೆಯಲಿರುವ ಕಾಂಗ್ರೆಸ್ ಕಾರ್ಯಕಾರಿ ಸಮಿತಿಯ ನವ ಸತ್ಯಾಗ್ರಹ ಬೈಠಕ್ ನಲ್ಲಿ ಭಾಗವಹಿಸಲಿದ್ದಾರೆ. ನಾಡಿದ್ದು ಎಐಸಿಸಿ ಸದಸ್ಯರ ಸಭೆಯಲ್ಲಿ ಭಾಗವಹಿಸಿ ಅಂದೇ  ಬೆಂಗಳೂರಿಗೆ ವಾಪಸ್ ಆಗಲಿದ್ದಾರೆ.

***************

“ಬೆಂಗಳೂರಿನ ರಸ್ತೆಗಳ ಗುಣಮಟ್ಟ ಹೆಚ್ಚಿಸಲು ನಗರದ ೧ ಸಾವಿರದ ೬೦೦ ಕಿಲೋಮೀಟರ್ ನಷ್ಟು ಬ್ಲಾಕ್ ಮತ್ತು ವೈಟ್ ಟಾಪಿಂಗ್ ಮಾಡಲಾಗುತ್ತಿದೆ” ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬಿಬಿಎಂಪಿ ವ್ಯಾಪ್ತಿಯಲ್ಲಿ ೧೦ ವಿಧಾನಸಭಾ ಕ್ಷೇತ್ರಗಳಲ್ಲಿ ರಸ್ತೆಗಳ ಡಾಂಬರೀಕರಣ ಹಾಗೂ ಕಾಮಗಾರಿಗಳ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಇಂದು ಒಂದೇ ದಿನ ೧೦ ಕಡೆಗಳಲ್ಲಿ ಬ್ಲಾಕ್ ಟಾಪಿಂಗ್ ಕಾಮಗಾರಿಗೆ ಚಾಲನೆ ನೀಡಲಾಗಿದೆ. ರಸ್ತೆಗಳಲ್ಲಿ ಹಾನಿಯಾದರೆ ಗುತ್ತಿಗೆದಾರರೇ ಅದನ್ನು ಸರಿಪಡಿಸಬೇಕು ಎಂದು ತಿಳಿಸಿದ್ದಾರೆ. ಬ್ಲಾಕ್ ಹಾಗೂ ವೈಟ್ ಟಾಪಿಂಗ್ ರಸ್ತೆಗಳು ೩೦ ವರ್ಷಗಳ ಕಾಲ ಬಾಳಿಕೆ ಬರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

****************

ನಮ್ಮ ಊರು, ನಮ್ಮ ಶಾಲೆ ಎಂಬ ಅಭಿಮಾನ ಪ್ರತಿಯೊಬ್ಬರಿಗೂ ಇರಬೇಕು ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ.

ಸೊರಬ ತಾಲೂಕು ಹುರುಳಿ ಗ್ರಾಮದಲ್ಲಿ ಶಾಲಾ ಶ್ರಮದಾನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಕ್ಕಳ ಭವಿಷ್ಯ ರೂಪಿಸುವುದು ಮಾತ್ರವಲ್ಲ ಸರ್ಕಾರದ ಆಸ್ತಿಯ ರಕ್ಷಣೆಯ ಹೊಣೆಯೂ ನಮ್ಮೆಲ್ಲರದ್ದಾಗಿದೆ ಎಂದು ಹೇಳಿದ್ದಾರೆ.

ಧ್ವನಿ: ಎಸ್.ಮಧು ಬಂಗಾರಪ್ಪ

****************

ಮಾರ್ಚ್ ೧ರಿಂದ ಮಾರ್ಚ್ ೨೦ರವರೆಗೆ ನಡೆದಿದ್ದ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ನಾಳೆ ಪ್ರಕಟವಾಗಲಿದೆ. ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಮಂಗಳವಾರ ಮಧ್ಯಾಹ್ನ ೧೨.೩೦ಕ್ಕೆ ಸುದ್ದಿಗೋಷ್ಠಿ ನಡೆಸಿ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ನಾಳೆ ೧.೩೦ಕ್ಕೆ ವೆಬ್‌ಸೈಟ್‌ನಲ್ಲಿ PUಅ ಫಲಿತಾಂಶ ಪ್ರಕಟವಾಗಲಿದ್ದು, ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಫಲಿತಾಂಶ ವೀಕ್ಷಣೆ ಮಾಡಬಹುದಾಗಿದೆ. karresults.nic.in,

kseab.karnataka.gov.in ಈ ಎರಡು ವೆಬ್‌ಸೈಟ್‌ಗಳಲ್ಲಿ ದ್ವಿತೀಯ ಪಿಯುಸಿ ಫಲಿತಾಂಶ ಲಭ್ಯವಿರಲಿದೆ.

***************

ಕಲಬುರಗಿ ನಗರದ ಕೆ.ಸಿ.ಟಿ. ಇಂಜಿನೀಯರಿಂಗ್ ಕಾಲೇಜಿನ ಆವರಣದಲ್ಲಿ ಇದೇ ಏಪ್ರಿಲ್ ೧೬ ರಂದು ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ. ಕಲ್ಯಾಣ ಕರ್ನಾಟಕದ ನಿರುದ್ಯೋಗ ಯುವಕ-ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಪ್ರಯೋಜನ ಪಡೆಯುವಂತೆ ವೈದ್ಯಕೀಯ ಶಿಕ್ಷಣ, ಕೌಲಶ್ಯಾಭಿವೃದ್ಧಿ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಮನವಿ ಮಾಡಿದ್ದಾರೆ.

ಬೆಂಗಳೂರಿನ ೧೨೫ ಕಂಪನಿಗಳು ಸೇರಿದಂತೆ ಹೈದ್ರಾಬಾದ್, ಮುಂಬೈ ಹಾಗೂ ಸುಮಾರು ೨೧೬ ಸ್ಥಳೀಯ ಕಂಪನಿಗಳು ಈಗಾಗಲೇ ಮೇಳದಲ್ಲಿ ಭಾಗವಹಿಸಲು ನೋಂದಣಿ ಮಾಡಿಕೊಂಡಿವೆ. ಇದುವರೆಗೆ ಸುಮಾರು ೬ ಸಾವಿರ ಅಭ್ಯರ್ಥಿಗಳು ನೋಂದಣಿ ಮಾಡಿದ್ದು, ೧೫ ಸಾವಿರ ಅಭ್ಯರ್ಥಿಗಳು ಭಾಗವಹಿಸುವ ಇದೆ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ.

***************

ಧಾರವಾಡ ಜಿಲ್ಲೆಯಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಕ್ರಮವಹಿಸಬೇಕು ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್ ಸೂಚಿಸಿದ್ದಾರೆ. ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮುಂದಿನ ೩ ದಿನಗಳಲ್ಲಿ ಕುಡಿಯುವ ಸಮಸ್ಯೆ ಕುರಿತಂತೆ ವರದಿ ಸಲ್ಲಿಸುವಂತೆ ಪಾಲಿಕೆಯ ಆಯುಕ್ತರಿಗೆ ಸಚಿವರು ನಿರ್ದೇಶನ ನೀಡಿದ್ದಾರೆ.

***************

ರಾಜ್ಯದ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದ್ದು, ಕರಾವಳಿಯಲ್ಲಿ ಒಹಣವೆ ಇತ್ತು. ರಾಜ್ಯದ ಅತಿ ಹೆಚ್ಚು ಉಷ್ಣಾಂಶ ೩೯.೮ ಡಿಗ್ರಿ ಸೆಲ್ಸಿಯಸ್ ಕಲಬುರ್ಗಿಯಲ್ಲಿ ದಾಖಲಾಗಿದೆ. ಇಂದು ಮತ್ತು ನಾಳೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ವೇಗದ ಬಿರುಗಾಳಿಯಿಂದ ಕೂಡಿದ ಗುಡುಗು ಸಹಿತ ಲಘು ಮಳೆಯಾಗಲಿದೆ.

ಮುಂದಿನ ಎರಡು ದಿನ ಉತ್ತರ ನಾಡಿನ ಬೆಳಗಾವಿ, ಗದಗ, ಹಾವೇರಿ, ಧಾರವಾಡ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ರಾಯಚೂರು, ಜಿಲ್ಲೆಗಳ ಪ್ರತ್ಯೇಕ ಪ್ರದೇಶಗಳಲ್ಲಿ ಹಗುರ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

****************

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ. ಗಾಯದ ಸಮಸ್ಯೆಯಿಂದ ಹೊರಗುಳಿದಿದ್ದ ಮುಂಬೈ ತಂಡದ ವೇಗಿ ಜಸ್ಪ್ರಿತ್ ಬೂಮ್ರಾ ಇಂದು ಆರ್‌ಸಿಬಿ ವಿರುದ್ಧ ಕಣಕ್ಕಿಳಿಯಲಿದ್ದಾರೆ.

********ಮುಕ್ತಾಯ*******